**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಾಂತರಾಮ್ ಬುಡ್ನ ಸಿದ್ದಿ ಇವರು ನಿಯಮ 73 ರಡಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರ ಹೇಳಿಕೆ:**

**ಪ್ರಶ್ನೆ:**

**ಕುದುರೆಮುಖ ರಾಷ್ಟ್ರೀಯ ಉದ್ಯಾನವನ ವ್ಯಾಪ್ತಿಯಲ್ಲಿ ಬರುವ ಬುಡಕಟ್ಟು ಮತ್ತು ಇತರೆ ಜನಾಂಗದ ಕುಟುಂಬಗಳನ್ನು ಬೇರೆ ಕಡೆ ಸ್ಥಳಾಂತರಗೊಳಿಸುವ ಕಾರ್ಯ(ಸ್ವ-ಇಚ್ಛೆಯಿಂದ ಹೋಗುವವರಿಗೆ) ನಡೆಯುತ್ತಿದ್ದು, ಸದರಿ ಕಾರ್ಯವು ಯಾವ ಯೋಜನೆ ಅಡಿ ಕೈಗೊಳ್ಳಲಾಗಿದೆ ಮತ್ತು ಇದಕ್ಕಾಗಿ ಮೀಸಲಿಟ್ಟ ಅನುದಾನ ಎಷ್ಟು. ಪ್ರತಿ ಕುಟುಂಬಕ್ಕೆ ನೀಡುವ ಪರಿಹಾರ ಮೊತ್ತ ಎಷ್ಟು. ಜಮೀನು ಹೊಂದಿರುವ ಕುಟುಂಬಗಳಿಗೆ ನೀಡುವ ಪರ್ಯಾಯ ಜಮೀನು ಅಥವಾ ಪರಿಹಾರ, ಅರಣ್ಯ ಪ್ರದೇಶದಲ್ಲಿ ತಲೆಮಾರುಗಳಿಂದ ಅವರು ಸಾಗುವಳಿ ಮಾಡಿಕೊಂಡು ಬಂದ ಅರಣ್ಯ ಭೂಮಿಗೆ ಪರಿಹಾರ, ಯೋಜನೆಯ ಮಾನದಂಡಗಳು, ಈ ಯೋಜನೆ ಪೂರ್ಣಗೊಳಿಸಲು ಇರುವ ಕಾಲಮಿತಿ, ಮುಂತಾದ ಮಹತ್ವದ ವಿಷಯಗಳ ಬಗ್ಗೆ.**

**ಹೇಳಿಕೆ:**

ಕುದುರೆಮುಖ ರಾಷ್ಟ್ರೀಯ ಉದ್ಯಾನವನ ವ್ಯಾಪ್ತಿಯಲ್ಲಿ ಬರುವ ಬುಡಕಟ್ಟು ಮತ್ತು ಇತರೆ ಜನಾಂಗದ ಕುಟುಂಬಗಳನ್ನು(ಸ್ವ-ಇಚ್ಛೆಯಿಂದ ಹೋಗುವವರಿಗೆ) ಕುದುರೆಮುಖ ರಾಷ್ಟ್ರೀಯ ಉದ್ಯಾನವನದ ಪುನರ್ವಸತಿ ಯೋಜನೆಯಡಿ ಸರ್ಕಾರದ ಆದೇಶ ಸಂಖ್ಯೆ: RD 26 REH 2003, ದಿನಾಂಕ: 18.04.2005 ರಂತೆ ಪರಿಹಾರ ಪಾವತಿಸಲಾಗುತ್ತಿದೆ.

ಕುದುರೆಮುಖ ರಾಷ್ಟ್ರೀಯ ಉದ್ಯಾನವನ ವ್ಯಾಪ್ತಿಯಲ್ಲಿ 1382 ಕುಟುಂಬಗಳು ವಾಸ್ತವ್ಯ ಇದ್ದು, 670 ಕುಟುಂಬಗಳು ಪುನರ್ವಸತಿಗಾಗಿ ಅರ್ಜಿ ಸಲ್ಲಿಸಿವೆ. ಈ ಪೈಕಿ 356 ಕುಟುಂಬಗಳಿಗೆ ರೂ.142.0934 ಕೋಟಿ ಪುನರ್ವಸತಿ ಪರಿಹಾರ ನೀಡಲಾಗಿದೆ. ಉಳಿದ 314 ಕುಟುಂಬಗಳ ಪೈಕಿ 76 ಕುಟುಂಬಗಳ ಮೌಲ್ಯಮಾಪನವು ವಿವಿಧ ಇಲಾಖಾ ವತಿಯಿಂದ ಮಾಡಲಾಗಿದ್ದು, ಅನುದಾನ ಲಭ್ಯತೆಯ ಮೇರೆಗೆ ಜಿಲ್ಲಾ ಮಟ್ಟದ ಪುನರ್ವಸತಿ ಪರಿಹಾರ ಸಮಿತಿ ವತಿಯಿಂದ ಅನುಮೋದನೆ ಪಡೆದು ಪರಿಹಾರ ವಿತರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಕುದುರೆಮುಖ ರಾಷ್ಟ್ರೀಯ ಉದ್ಯಾನವನದಲ್ಲಿ ಪ್ರಸ್ತುತ ಪುನರ್ವಸತಿ ಬಯಸಿ ಅರ್ಜಿ ಸಲ್ಲಿಸಿದ ಅರ್ಜಿದಾರರ ಮನೆ, ಜಮೀನು ಹಾಗೂ ಇತರೆ ತೋಟಗಾರಿಕಾ ಬೆಳೆ ಹಾಗೂ ಮರಮಟ್ಟುಗಳ ಮೌಲ್ಯಮಾಪನವನ್ನು ಹಾಲಿ ವರ್ಷದಲ್ಲಿ ಚಾಲ್ತಿಯಲ್ಲಿರುವ ದರದಂತೆ ಕೈಗೊಂಡು ಜಿಲ್ಲಾಧಿಕಾರಿಗಳ ಸಮಿತಿ ವತಿಯಿಂದ ಅನುಮೋದನೆ ಪಡೆದು ಸರ್ಕಾರದ ನಿಯಮದಂತೆ ಪರಿಹಾರ ಮೊಬಲಗನ್ನು ಅನುದಾನ ಲಭ್ಯತೆಯ ಆಧಾರದಲ್ಲಿ ಪಾವತಿ ಮಾಡಲಾಗುತ್ತಿದೆ.

ಸರ್ಕಾರದ ಆದೇಶ ಸಂಖ್ಯೆ: RD 26 REH 2003, ದಿನಾಂಕ: 18.04.2005 ರಲ್ಲಿ ಉಲ್ಲೇಖಿಸಿರುವ ಮಾನದಂಡಗಳಾದ 1) ಸ್ವಂತ ಜಮೀನು, ಇತ್ಯಾದಿ, 2) ಕಂದಾಯ ಜಮೀನನ್ನು ಒತ್ತುವರಿ ಮಾಡಿಕೊಂಡಿರುವುದು ಮತ್ತು 3) ಕಿರು ಅರಣ್ಯ ಹಾಗೂ ರಾಜ್ಯ ಅರಣ್ಯವನ್ನು ಒತ್ತುವರಿ ಮಾಡಿಕೊಂಡಿರುವುದರ ಆಧಾರದ ಮೇರೆಗೆ ಭೂಸ್ವಾಧೀನ ಕಾಯ್ದೆ ಹಾಗೂ ಚಾಲ್ತಿಯಲ್ಲಿರುವ ನಿಯಮಗಳನ್ವಯ ಪರಿಹಾರವನ್ನು ಒದಗಿಸಲಾಗುತ್ತಿದೆ.

ಕಡತ ಸಂಖ್ಯೆ: ಅಪಜೀ 24 ಎಫ್‌ಡಬ್ಲ್ಯೂಎಲ್ 2026

**(ಈಶ್ವರ ಬಿ. ಖಂಡ್ರೆ)**
ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು